ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 04 (182)

ಸದಸ್ಯರ ಹೆಸರು : ಶ್ರೀ ಅರವಿಂದ ಕುಮಾರ್ ಅರಳಿ
(ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : 13/09/2021.

ಉತ್ತರಿಸುವ ಸಚಿವರು : ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು.

ಕ್ರ ಸಂ.	ಪ್ರಶ್ನೆ	ಉತ್ತರ
ಅ)	ಬೀದರ್ ನಗರದಲ್ಲಿ ಸುಮಾರು 2015–16ರಲ್ಲಿ ಪ್ರಾರಂಭವಾದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಮಹಾವಿದ್ಯಾಲಯ ಯಾವ ಶೈಕ್ಷಣಿಕ ವರ್ಷದಿಂದ ಪ್ರಾರಂಭಿಸಲಾಗುವುದು;	ಸರ್ಕಾರವು ದಿನಾಂಕ:13–01–2017 ರಲ್ಲಿ ಬೀದರ್ ಜಿಲ್ಲೆಯಲ್ಲಿ ಹೊಸ ಸರ್ಕಾರಿ ಇಂಜಿನಿಯರಿಂಗ್ ಕಾಲೇಜನ್ನು ಪ್ರಾರಂಭಿಸಲು ಅನುಮೋದನೆ ನೀಡಿದೆ. ಸದರಿ ಸಂಸ್ಥೆಯ ನಿವೇಶನದ ಮಂಜೂರಾತಿಯ ವಿಳಂಬದಿಂದ ದಿನಾಂಕ: 27/08/2018 ರಿಂದ ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಪ್ರಾರಂಭಿಸಿದ್ದು, ಮೊದಲನೇ ಹಂತದ ಕಾಮಗಾರಿ ಪೂರ್ಣಗೊಂಡಿದ್ದು, ಎರಡನೇ ಹಂತದ ಕಾಮಗಾರಿ ಪ್ರಗತಿಯಲ್ಲಿದೆ. ಎ.ಐ.ಸಿ.ಟಿ.ಇ ಮಾರ್ಗಸೂಚಿಯಂತೆ ಕಟ್ಟಡ ಕಾಮಗಾರಿ ಪೂರ್ಣಗೊಳಿಸಿ, ಇತರೆ ಮೂಲಭೂತ ಸೌಕರ್ಯಗಳನ್ನು ಒದಗಿಸಿ ಎಐಸಿಟಿಇ ಅನುಮೋದನೆಯನ್ನು ಪಡೆದು ಕೂಡಲೇ ಕಾಲೇಜನ್ನು ಪ್ರಾರಂಭಿಸಲಾಗುವುದು.
ಆ)	ಕಟ್ಟಡ ಕಾಮಗಾರಿ ವಿಳಂಬವಾಗಲು ಕಾರಣವೇನು; ಇದರ ಅಂದಾಜು ವೆಚ್ಚ ಎಷ್ಟು; ಖರ್ಚಾದ ವೆಚ್ಚವೆಷ್ಟು;	ಸದರಿ ಇಂಜಿನಿಯರಿಂಗ್ ಕಾಲೇಜು ಪ್ರಾರಂಭಿಸಲು ನಿವೇಶನದ ಲಭ್ಯತೆಯ ವಿಳಂಬದಿಂದಾಗಿ ಕಟ್ಟಡ ಕಾಮಗಾರಿಯನ್ನು ದಿನಾಂಕ: 27/08/2018 ರಿಂದ ಪ್ರಾರಂಭಿಸಲಾಗಿದ್ದು, ಮೊದಲನೇ ಹಂತದ ಕಾಮಗಾರಿ ಪೂರ್ಣಗೊಂಡಿದ್ದು, ಎರಡನೇ ಹಂತದ ಕಾಮಗಾರಿ ಪ್ರಗತಿಯಲ್ಲಿದೆ. ಅಂದಾಜು ವೆಚ್ಚ ರೂ.5800.00ಲಕ್ಷಗಳಾಗಿದ್ದು, ರೂ. 4300.00 ಲಕ್ಷಗಳು ವೆಚ್ಚವಾಗಿರುತ್ತದೆ.

ಇ)	ಈ ಕಟ್ಟಡ ಕಾಮಗಾರಿ ಯಾವ ಏಜೆನ್ಸಿಗೆ ನೀಡಲಾಗಿದೆ; ಕಟ್ಟಡ ಕಾಮಗಾರಿಯನ್ನು ಮುಗಿಸುವ ಅಂತಿಮ ಸಮಯವನ್ನು ಸರ್ಕಾರ ನೀಡಲಾಗಿದೆಯೆ; ನೀಡಿದ್ದಲ್ಲಿ, ಅದು ಯಾವ ವರ್ಷದಲ್ಲಿ/ಎಷ್ಟು ವರ್ಷಗಳಲ್ಲಿ ಮುಗಿಯಬೇಕಾಗಿತ್ತು;	ಮೆ: ರೈಟ್ಸ್ ಸಂಸ್ಥೆಗೆ ವಹಿಸಲಾಗಿದೆ. ಹೌದು. ದಿನಾಂಕ: 25/02/2023 ಅಂತಿಮ ಸಮಯ ನೀಡಲಾಗಿದೆ.
ಈ)	ಗಡುವು ನೀಡಿದ ಸಮಯದಲ್ಲಿ ಗುತ್ತಿಗೆದಾರರು ಕಾಮಗಾರಿ ಮುಗಿಸದಿದ್ದಲ್ಲಿ ಸರ್ಕಾರ ಯಾವ ರೀತಿಯಲ್ಲಿ ಕ್ರಮವಹಿಸುವುದು ?	ಸಂಬಂಧಪಟ್ಟ ಏಜೆನ್ಸಿ/ಗುತ್ತಿಗೆದಾರರ ವಿರುದ್ಧ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು.

ಸಂಖ್ಯೆ: ಇಡಿ 64 ಹೆಚ್‌ಪಿಟಿ 2021)

(ಡಾ: ಅಶ್ವಥನಾರಾಯಣ.ಸಿ.ಎನ್.)
ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ,
ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ
ಮತ್ತು ಕೌಶಲ್ಯಾಭಿವೃದ್ಧಿ ಸಚಿವರು.